Akashvani: Bangalore
National Bulletin In Kannada
18.05.2024; 07.35AM

**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

18.05.2024; 07.35AM

***********

**ಮುಖ್ಯಾಂಶಗಳು :**

1. ಐದನೇ ಹಂತದ ಲೋಕಸಭಾ ಚುನಾವಣೆ; ನಾಡಿದ್ದು ಮತದಾನ, ಸಂಜೆ ಬಹಿರಂಗ ಪ್ರಚಾರಕ್ಕೆ ತೆರೆ
2. ಸಾರ್ವತ್ರಿಕ ಚುನಾವಣೆ; ವಿವಿಧ ಪಕ್ಷಗಳ ನಾಯಕರಿಂದ ಮತದಾರರ ಮನವೊಲಿಕೆ ಯತ್ನ
3. ಈ ತಿಂಗಳಾಂತ್ಯದ ವೇಳೆಗೆ ನೈಋತ್ಯ ಮುಂಗಾರು ಕೇರಳಕ್ಕೆ ಆಗಮನ ಸಾಧ್ಯತೆ - ಭಾರತೀಯ ಹವಾಮಾನ ಇಲಾಖೆ
4. ಕಾಂಬೋಡಿಯಾ - ದಕ್ಷಿಣ ಪೂರ್ವ ಏಷ್ಯಾ ರಾಷ್ಟ್ರಗಳಿಗೆ ಉದ್ಯೋಗ ನಿಮಿತ್ತ ತೆರಳುವವರಿಗೆ ವಿದೇಶಾಂಗ ಸಚಿವಾಲಯದಿಂದ ಎಚ್ಚರಿಕೆ
5. ಐಪಿಎಲ್ ಕ್ರಿಕೆಟ್; ಬೆಂಗಳೂರಿನಲ್ಲಿಂದು ಸಂಜೆ ರಾಯಲ್ ಚಾಲೆಂಜರ್ಸ್ ಹಾಗೂ ಚೆನ್ನೈ ಸೂಪರ್ ಕಿಂಗ್ಸ್ ಮುಖಾಮುಖಿ

******

೫ನೇ ಹಂತದ ಲೋಕಸಭಾ ಚುನಾವಣೆಗೆ ಸೋಮವಾರ ಮತದಾನ ನಡೆಯಲಿದೆ. ೮ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳನ್ನು ಒಳಗೊಂಡಂತೆ ೪೯ ಲೋಕಸಭಾ ಕ್ಷೇತ್ರಗಳಲ್ಲಿ ಮತದಾನ ಮೇ ೨೦ರಂದು ಬೆಳಗ್ಗೆ ೭ ರಿಂದ ಸಂಜೆ ೬ರ ವರೆಗೆ ನಡೆಯಲಿದೆ. ಈ ಚುನಾವಣೆಗಾಗಿ ಬಹಿರಂಗ ಪ್ರಚಾರಕ್ಕೆ ಇಂದು ಸಂಜೆ ತೆರೆ ಬೀಳಲಿದೆ. ನಾಳೆ ಮನೆ ಮನೆಗೆ ತೆರಳಿ ಪ್ರಚಾರ ಮಾಡಲು ಅವಕಾಶವಿರುತ್ತದೆ. ಪ್ರಮುಖ ರಾಜಕೀಯ ಪಕ್ಷಗಳ ಮುಖಂಡರು ರ್‍ಯಾಲಿ, ರೋಡ್ ಶೋ ಹಾಗೂ ಸಾರ್ವಜನಿಕ ಸಭೆಗಳ ಮೂಲಕ ಮತದಾರರ ಮನವೊಲಿಸುವ ಅಂತಿಮ ಕಸರತ್ತಿನಲ್ಲಿ ತೊಡಗಿದ್ದಾರೆ. ಇನ್ನು ಮೂರು ಹಂತದ ಚುನಾವಣೆ ಮಾತ್ರ ಬಾಕಿ ಇದೆ. ಈ ಮಧ್ಯೆ, ೬ನೇ

ಹಂತದ ಚುನಾವಣೆಯಲ್ಲಿ ಶೇಕಡ ೬೯.೧೬ರಷ್ಟು ಮತದಾನವಾಗಿದೆ. ಚುನಾವಣಾ ಆಯೋಗ ಬಿಡುಗಡೆ ಮಾಡಿರುವ ಪರಿಷ್ಕೃತ ಅಂಕಿ-ಅಂಶಗಳ ಪ್ರಕಾರ ಶೇಕಡ ೬೯.೫೮ರಷ್ಟು ಪುರುಷರು ಹಾಗೂ ಶೇಕಡ ೬೮.೭೬ರಷ್ಟು ಮಹಿಳೆಯರು ತಮ್ಮ ಹಕ್ಕು ಚಲಾಯಿಸಿದ್ದಾರೆ. ಶೇಕಡ ೩೪.೨೩ರಷ್ಟು ತೃತೀಯ ಲಿಂಗಿಗಳು ಮತದಾನ ಮಾಡಿದ್ದಾರೆ. ಈ ಹಂತದಲ್ಲಿ ೯ ರಾಜ್ಯಗಳು ಹಾಗೂ ಒಂದು ಕೇಂದ್ರಾಡಳಿತ ಪ್ರದೇಶದ ವ್ಯಾಪ್ತಿಯ ೯೬ ಲೋಕಸಭಾ ಕ್ಷೇತ್ರಗಳಿಗೆ ಮೇ ೧೩ರಂದು ಮತದಾನ ನಡೆದಿತ್ತು. ಈ ಹಂತದಲ್ಲಿ ಒಟ್ಟು ಒಂದು ಸಾವಿರದ ೭೧೭ ಅಭ್ಯರ್ಥಿಗಳು ಕಣದಲ್ಲಿದ್ದರು.

******

ಈ ಬಾರಿಯ ಸಾರ್ವತ್ರಿಕ ಚುನಾವಣೆಯಲ್ಲಿ ಎನ್‌ಡಿಎ ದಾಖಲೆಯ ಸ್ಥಾನಗಳಲ್ಲಿ ಗೆಲುವು ಸಾಧಿಸಲಿದೆ ಎಂದು ಬಿಜೆಪಿ ಹಿರಿಯ ನಾಯಕ ಹಾಗೂ  ಪ್ರಧಾನಮಂತ್ರಿ ನರೇಂದ್ರ ಮೋದಿ ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಅವರು ಮುಂಬೈನಲ್ಲಿ ನಿನ್ನೆ ಸಂಜೆ ರ್‍ಯಾಲಿಯನ್ನುದ್ದೇಶಿಸಿ ಮಾತನಾಡಿ, ೨೦೪೭ರ ವೇಳೆಗೆ ದೇಶವನ್ನು ಅಭಿವೃದ್ಧಿ ಹೊಂದಿದ ದೇಶವನ್ನಾಗಿ ಮಾಡಲು ಸರ್ಕಾರ ದಿನದ ೨೪ ಗಂಟೆಗಳು ಶ್ರಮಿಸುತ್ತಿದೆ. ಸಾಮಾನ್ಯ ಜನರ ಬದುಕು ಸುಗಮಗೊಳಿಸುವುದು ತಮ್ಮ ಆದ್ಯತೆಯಾಗಿದೆ ಎಂದರು.

ಶಾಂತಿ, ಸುರಕ್ಷತೆ ಮತ್ತು ಮಕ್ಕಳ ಉಜ್ವಲ ಭವಿಷ್ಯಕ್ಕಾಗಿ ಮತದಾರರು ಹೆಚ್ಚಿನ ಸಂಖ್ಯೆಯಲ್ಲಿ ಬಂದು ಮತ ಚಲಾಯಿಸಬೇಕು ಎಂದ ಅವರು, ಹಿಂದಿನ ಸರ್ಕಾರಗಳಿಗೆ ಭಾರತೀಯರ ಸಾಮರ್ಥ್ಯದ ಬಗ್ಗೆ ನಂಬಿಕೆ ಇರಲಿಲ್ಲ. ಆದರೆ ತಮ್ಮ ಸರ್ಕಾರಕ್ಕೆ ದೇಶದ ಜನರ ಶಕ್ತಿಯ ಬಗ್ಗೆ ವಿಶ್ವಾಸವಿದೆ ಎಂದರು. ಕಳೆದ ಹತ್ತು ವರ್ಷಗಳಲ್ಲಿ ತಮ್ಮ ಸರ್ಕಾರ ಮಾಡಿರುವ ಸಾಧನೆಗಳನ್ನು ಅವರು ವಿವರಿಸಿದರು. ರ್‍ಯಾಲಿಯಲ್ಲಿ ಮಹಾರಾಷ್ಟ್ರ ಮುಖ್ಯಮಂತ್ರಿ ಏಕನಾಥ್ ಶಿಂಧೆ, ಉಪಮುಖ್ಯಮಂತ್ರಿಗಳಾದ ದೇವೇಂದ್ರ ಫಡ್ನವೀಸ್, ಅಜಿತ್ ಪವಾರ್ ಮತ್ತಿತರರು ಉಪಸ್ಥಿತರಿದ್ದರು.

******

ಮೈತ್ರಿ ಸರ್ಕಾರ ಅಧಿಕಾರಕ್ಕೆ ಬಂದರೆ ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಸಂವಿಧಾನವನ್ನು ಯಥಾಸ್ಥಿತಿಯಲ್ಲಿ ಮುಂದುವರಿಸಲಾಗುವುದು. ಯಾವುದೇ ಸಂದರ್ಭದಲ್ಲೂ ಬದಲಾವಣೆಗಳನ್ನು ಮಾಡುವುದಿಲ್ಲ ಎಂದು ಕಾಂಗ್ರೆಸ್ ಅಧ್ಯಕ್ಷ ಎಂ. ಮಲ್ಲಿಕಾರ್ಜುನ ಖರ್ಗೆ ಭರವಸೆ ನೀಡಿದ್ದಾರೆ. ಅವರು ಮುಂಬೈನಲ್ಲಿ ಇಂಡಿಯಾ ಮೈತ್ರಿ ರ್‍ಯಾಲಿಯನ್ನುದ್ದೇಶಿಸಿ ಮಾತನಾಡಿ, ಕೇಂದ್ರ ಸರ್ಕಾರ ಪ್ರತಿಪಕ್ಷಗಳ ನಾಯಕರನ್ನು ಹತ್ತಿಕ್ಕಲು ಇಡಿ, ಸಿಬಿಐ ಮತ್ತು ಆದಾಯ ತೆರಿಗೆ ಇಲಾಖೆಗಳನ್ನು ಬಳಕೆ ಮಾಡಿಕೊಳ್ಳುತ್ತಿದೆ ಎಂದು ದೂರಿದರು. ನ್ಯಾಷನಲ್ ಕಾಂಗ್ರೆಸ್ ಪಾರ್ಟಿಯ ಮುಖ್ಯಸ್ಥ ಶರದ್ ಪವಾರ್, ದೇಶದಲ್ಲಿ ಪ್ರಜಾಪ್ರಭುತ್ವ ವ್ಯವಸ್ಥೆ ಬಲವರ್ಧನೆಗೊಳಿಸಲು ಇಂಡಿಯಾ ಮೈತ್ರಿಕೂಟಕ್ಕೆ ಮತಹಾಕಬೇಕು ಎಂದು ಕೋರಿದರು. ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್, ಎನ್‌ಡಿಎ ಸರ್ಕಾರದ ದೇಶದಲ್ಲಿ ಪ್ರತಿಪಕ್ಷಗಳನ್ನು ಗುರಿಯಾಗಿಸಿಕೊಂಡು, ಅವುಗಳ ಮೇಲೆ ದಾಳಿ ನಡೆಸುತ್ತಿದೆ ಎಂದರು. ಶಿವಸೇನೆ ಮುಖ್ಯಸ್ಥ ಉದ್ಧವ್ ಠಾಕ್ರೆ, ಬಿಜೆಪಿ ತನಗೆ ಅನುಕೂಲವಾಗುವಂತೆ ಕುಟುಂಬ ರಾಜಕಾರಣವನ್ನು ಒಪ್ಪುತ್ತದೆ ಎಂದು ಟೀಕಿಸಿದರು.

******

ನೈಋತ್ಯ ಮುಂಗಾರು ಈ ತಿಂಗಳಾಂತ್ಯದಲ್ಲಿ ಕೇರಳಕ್ಕೆ ಆಗಮಿಸುವ ಸಾಧ್ಯತೆ ಇದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ರಾಜ್ಯದಲ್ಲಿ ಕಳೆದ ಕೆಲವು ದಿನಗಳಿಂದ ಆಗಾಗ್ಗೆ ಮಳೆ ಸುರಿಯುತ್ತಿರುವುದರಿಂದ ಉಷ್ಣಾಂಶದ ಪ್ರಮಾಣ ಗಣನೀಯವಾಗಿ ತಗ್ಗಿದೆ. ಕೇರಳದ ಮಲ್ಲಪುರಂ ಮತ್ತು ವೈನಾಡ್ ಜಿಲ್ಲೆಗಳಲ್ಲಿ ಭಾರೀ ಮಳೆ ಬೀಳುವ ಸಾಧ್ಯತೆ ಇರುವುದರಿಂದ ಹವಾಮಾನ ಇಲಾಖೆ ಆರೆಂಜ್ ಅಲರ್ಟ್‌ಅನ್ನು ಘೋಷಿಸಿದೆ. ಅಲ್ಲದೆ ತಿರುವನಂತಪುರಂ, ಕೊಲ್ಲಂ ಸೇರಿದಂತೆ ೧೦ ಜಿಲ್ಲೆಗಳಲ್ಲಿ ಯೆಲ್ಲೋ ಅಲರ್ಟ್ ಘೋಷಿಸಲಾಗಿದೆ. ಕೇರಳದ ಹಲವೆಡೆ ಗಂಟೆಗೆ ೫೦ ಕಿಲೋಮೀಟರ್ ವೇಗದಲ್ಲಿ ಗಾಳಿ ಬೀಸುತ್ತಿದ್ದು, ಆಗಾಗ್ಗೆ ಮಳೆಯಾಗುತ್ತಿದೆ. ಕೇರಳದ ಕರಾವಳಿ ಮತ್ತು ಲಕ್ಷದ್ವೀಪ ಪ್ರದೇಶದಲ್ಲಿ ಶೀತ ವಾತಾವರಣ ನಿರ್ಮಾಣವಾಗಿದೆ. ಮೀನುಗಾರರು ಸಮುದ್ರಕ್ಕಿಳಿಯದಂತೆ ಸೂಚನೆ ನೀಡಲಾಗಿದೆ. ಇತ್ತೀಚಿನ ಹವಾಮಾನ ಮುನ್ಸೂಚನೆಯಂತೆ ಇಂದು ಮತ್ತು ನಾಳೆ ಹಲವು ಜಿಲ್ಲೆಗಳಲ್ಲಿ ಮಳೆಯಾಗಲಿದ್ದು, ಮುಂದಿನ ವಾರ ಭಾರೀ ಮಳೆಯಾಗುವ ಸಾಧ್ಯತೆ ಇದೆ.

******

ಕಾಂಬೋಡಿಯಾ ಮತ್ತು ಇತರ ದಕ್ಷಿಣ ಪೂರ್ವ ಏಷ್ಯಾ ರಾಷ್ಟ್ರಗಳಿಗೆ ಉದ್ಯೋಗ ನಿಮಿತ್ತ ತೆರಳುವ ಭಾರತೀಯ ಪ್ರಜೆಗಳು ನಕಲಿ ಏಜೆಂಟ್‌ಗಳ ಹಾವಳಿ ಬಗ್ಗೆ ಜಾಗೃತೆಯಿಂದ ಇರಬೇಕು ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯ ಎಚ್ಚರಿಕೆಯನ್ನು ನೀಡಿದೆ. ಕಾಂಬೋಡಿಯಾ ಮತ್ತು ಲಾವೋಸ್‌ನಲ್ಲಿನ ಭಾರತೀಯ ರಾಯಭಾರ ಕಚೇರಿಗಳು ಈ ಸೂಚನೆಯನ್ನು ಬಿಡುಗಡೆ ಮಾಡಿದ್ದು, ಆ ಪ್ರದೇಶದಲ್ಲಿ ಹಲವು ನಕಲಿ ಏಜೆಂಟ್‌ಗಳು ಕಾರ್ಯ ನಿರ್ವಹಿಸುತ್ತಿದ್ದು, ಅವರು ಜನರನ್ನು ಮೋಸ ಮಾಡುವ ಕಂಪನಿಗಳತ್ತ ಸೆಳೆಯುತ್ತಿದ್ದಾರೆ ಎಂದು ಹೇಳಲಾಗಿದೆ. ಕಾಂಬೋಡಿಯಾದಲ್ಲಿ ಯಾರೇ ಉದ್ಯೋಗ ಪಡೆದರು ಅವರು ಅಧಿಕೃತ ಏಜೆಂಟ್‌ಗಳ ಮೂಲಕ ಮಾತ್ರ ವೃತ್ತಿಯನ್ನು ಕೈಗೊಳ್ಳಬಹುದಾಗಿದೆ. ಥೈಲ್ಯಾಂಡ್‌ನಲ್ಲಿ ಇತ್ತೀಚೆಗೆ ಹಲವು ಭಾರತೀಯ ಪ್ರಜೆಗಳು ಮೋಸಕ್ಕೊಳಗಾದ ಹಿನ್ನೆಲೆಯಲ್ಲಿ ಈ ಎಚ್ಚರಿಕೆಯನ್ನು ಬಿಡುಗಡೆ ಮಾಡಲಾಗಿದೆ.

******

ಛಾಬ್ಹಾರ್ ಬಂದರು ಅಫ್ಘಾನಿಸ್ತಾನಕ್ಕೆ ಮತ್ತು ಇತರ ಕೇಂದ್ರ ಏಷ್ಯಾ ರಾಷ್ಟ್ರಗಳಿಗೆ ಸಂಪರ್ಕದ ತಾಣವಾಗಲಿದ್ದು, ಅದರ ಪೂರ್ಣ ಸಾಮರ್ಥ್ಯವನ್ನು ಬಳಸಿಕೊಳ್ಳಲು ಭಾರತ ಸಿದ್ಧವಿದೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯ ತಿಳಿಸಿದೆ. ದೆಹಲಿಯಲ್ಲಿ ನಿನ್ನೆ ಸುದ್ದಿಗೋಷ್ಠಿಯಲ್ಲಿ ಮಾಹಿತಿ ನೀಡಿದ ವಿದೇಶಾಂಗ ಸಚಿವಾಲಯಗಳ ವಕ್ತಾರ ರಣದೀರ್ ಜೈಸ್ವಾಲ್, ಭಾರತ ಮತ್ತು ಇರಾನ್ ನಡುವೆ ದೀರ್ಘಕಾಲದ ಒಪ್ಪಂದವಾಗಿರುವುದು ಪ್ರಮುಖ ಸಾಧನೆಯಾಗಿದೆ. ಬಂದರು ಮೂಲಕ ಭಾರತ ಅಫ್ಘಾನಿಸ್ತಾನಕ್ಕೆ ಸಾಕಷ್ಟು ಮಾನವೀಯ ನೆರವನ್ನು ನೀಡಲು ಸಾಧ್ಯವಾಗಿದೆ ಎಂದರು. ಛಾಬ್ಹಾರ್ ಬಂದರಿನ ಮೂಲಕ ಅಫ್ಘಾನಿಸ್ತಾನಕ್ಕೆ ಮಾನವೀಯತೆಯ ನೆಲೆಯಲ್ಲಿ ಸಹಾಯ ಮಾಡುತ್ತಿರುವುದು ಅಮೆರಿಕಾಕ್ಕೂ ತಿಳಿದಿದೆ ಎಂದರು. ವಿದೇಶಾಂಗ ವ್ಯವಹಾರಗಳ ಸಚಿವಾಲಯದ ಆರ್ಥಿಕ ಸಂಬಂಧಗಳ ಕಾರ್ಯದರ್ಶಿ ಡಿ. ರವಿ ಅವರು, ಇದೇ ೧೦ ರಿಂದ ಎರಡು ದಿನಗಳ ಕಾಲ ಕಜಕಸ್ತಾನದ ಆಸ್ತಾನಾಗೆ ಭೇಟಿ ನೀಡಲಿದ್ದು, ಅಲ್ಲಿ ಅವರು ಶಾಂಘೈ ಸಹಕಾರ ಶೃಂಗಸಭೆಯಲ್ಲಿ ಭಾರವನ್ನು ಪ್ರತಿನಿಧಿಸಲಿದ್ದಾರೆ.

******

೫೫ನೇ ಭಾರತೀಯ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವ - ಇಫಿಯ ಅಧಿಕೃತ ಪೋಸ್ಟರ್ ಅನ್ನು ಕೇಂದ್ರ ವಾರ್ತಾ ಮತ್ತು ಪ್ರಸಾರ ಕಾರ್ಯದರ್ಶಿ ಸಂಜಯ್ ಜಜು ಫ್ರಾನ್ಸ್‌ನಲ್ಲಿ ನಡೆಯುತ್ತಿರುವ ೭೭ನೇ ಕಾನ್ಸ್ ಚಲನಚಿತ್ರೋತ್ಸವದಲ್ಲಿ ಬಿಡುಗಡೆ ಮಾಡಿದ್ದಾರೆ. ಅಂತಾರಾಷ್ಟ್ರೀಯ ಚಲನಚಿತ್ರೋತ್ಸವ ಪ್ರತಿ ವರ್ಷ ನವೆಂಬರ್‌ನಲ್ಲಿ ಗೋವಾದಲ್ಲಿ ನಡೆಯಲಿದೆ. ಜಜು ಅವರೊಂದಿಗೆ ಈ ವೇಳೆ ಚಿತ್ರ ನಿರ್ಮಾಪಕರಾದ ಅಶೋಕ್ ಅಮೃತ್ ರಾಜ್, ರಿಚಾ ಮೆಹ್ತಾ, ಗಾಯಕ ಶಾನ್, ನಟ ರಾಜ್‌ಪಾಲ್ ಯಾದವ್ ಮತ್ತು ಹಿರಿಯ ಕಲಾವಿದರಾದ ಬಾಬಿ ಬೇಡಿ ಮತ್ತಿತರರು ಉಪಸ್ಥಿತರಿದ್ದರು. ಭಾರತ ಇದೇ ಮೊದಲ ಬಾರಿಗೆ ಕಾನ್ಸ್ ಚಲನಚಿತ್ರೋತ್ಸವದಲ್ಲಿ ಭಾರತ ಪರ್ವವನ್ನು ಆಯೋಜಿಸಿದೆ. ೨೫೦ಕ್ಕೂ ಅಧಿಕ ಪ್ರತಿನಿಧಿಗಳು ಜಾಗತಿಕ ವೇದಿಕೆಯಲ್ಲಿ ಭಾರತದ ಸಂಸ್ಕೃತಿ, ಆಹಾರ ಪದ್ಧತಿ ಹಾಗೂ ಚಲನಚಿತ್ರಗಳನ್ನು ಪ್ರದರ್ಶಿಸಿ, ಮೆಚ್ಚುಗೆ ಗಳಿಸಿದರು.

******

ನೇಪಾಳದ ಪ್ರಧಾನಮಂತ್ರಿ ಪುಷ್ಪಕಮಲ್ ದಹಲ್ ಪ್ರಚಂಡ, ಸಂಸತ್ ಒಕ್ಕೂಟ ಸಚಿವಾಲಯಕ್ಕೆ ಪತ್ರ ಬರೆದು, ತಾವು ಸೋಮವಾರ ಪ್ರಜಾಪ್ರತಿನಿಧಿ ಸಭೆಯಲ್ಲಿ ವಿಶ್ವಾಸ ಮತಯಾಚನೆ ಮಾಡುವುದಾಗಿ ತಿಳಿಸಿದ್ದಾರೆ. ನೇಪಾಳ ಸಂವಿಧಾನದಡಿ ಮೈತ್ರಿ ಸರ್ಕಾರದಲ್ಲಿ ನೀಡಲಾಗಿದ್ದ ಬೆಂಬಲವನ್ನು ವಾಪಸ್ ಪಡೆದ ೩೦ ದಿನಗಳಲ್ಲಿ ಪ್ರಜಾಪ್ರತಿನಿಧಿ ಸಭೆಯಲ್ಲಿ ವಿಶ್ವಾಸ ಮತವನ್ನು ಸಾಬೀತುಪಡಿಸಬೇಕಿದೆ. ಉಪೇಂದ್ರ ಯಾದವ್ ನೇತೃತ್ವದ ಜನತಾ ಸಮಾಜವಾದಿ ಪಕ್ಷ ವಿಭಜನೆಗೊಂಡು, ಮೇ ೧೩ರಂದು ತನ್ನ ಬೆಂಬಲ ವಾಪಸ್ ಪಡೆದ ಹಿನ್ನೆಲೆಯಲ್ಲಿ ಪ್ರಚಂಡ ಅವರು ವಿಶ್ವಾಸ ಮತಯಾಚನೆ ಮಾಡುತ್ತಿದ್ದಾರೆ. ವಿಶ್ವಾಸ ಮತಯಾಚನೆ ಗೆಲ್ಲಲು ೧೩೮ ಸಂಸದರ ಮತ ಅಗತ್ಯವಿದೆ.

******

ಮುಂಬೈನ ವಾಂಖೆಡೆ ಕ್ರೀಡಾಂಗಣದಲ್ಲಿ ನಿನ್ನೆ ರಾತ್ರಿ ನಡೆದ ಐಪಿಎಲ್ ಟಿ೨೦ ಕ್ರಿಕೆಟ್ ಟೂರ್ನಿಯ ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್ ತಂಡದ ವಿರುದ್ಧ ಲಖನೌ ಸೂಪರ್ ಜೈಂಟ್ಸ್ ತಂಡ ೧೮ ರನ್‌ಗಳ ಗೆಲುವು ಸಾಧಿಸಿದೆ. ಟಾಸ್ ಸೋತು ಮೊದಲು ಬ್ಯಾಟ್ ಮಾಡಿದ ಲಖನೌ ತಂಡ, ನಿಗದಿತ ೨೦ ಓವರ್‌ಗಳಲ್ಲಿ ೬ ವಿಕೆಟ್ ನಷ್ಟಕ್ಕೆ ೨೧೪ ರನ್ ಗಳಿಸಿತು. ಲಖನೌ ಪರ ನಿಖೋಲಸ್

ಪೂರನ್ ೨೯ ಎಸೆತಗಳಲ್ಲಿ ೭೫ ಹಾಗೂ ಕೆ.ಎಲ್.ರಾಹುಲ್ ೪೧ ಎಸೆತಗಳಲ್ಲಿ ೫೫ ರನ್ ಗಳಿಸಿ ತಂಡದ ಮೊತ್ತ ಹಿಗ್ಗಿಸುವಲ್ಲಿ ಪ್ರಮುಖ ಪಾತ್ರ ವಹಿಸಿದರು. ಮುಂಬೈ ಪರ ನುವಾನ್ ತುಶಾರಾ ಹಾಗೂ ಪಿಯೂಶ್ ಚಾವ್ಲಾ ತಲಾ ಮೂರು ವಿಕೆಟ್ ಪಡೆದರು. ೨೧೫ ರನ್‌ಗಳ ಗೆಲುವಿನ ಗುರಿ ಬೆನ್ನತ್ತಿದ ಮುಂಬೈ ತಂಡ ೨೦ ಓವರ್‌ಗಳಲ್ಲಿ ೬ ವಿಕೆಟ್ ನಷ್ಟಕ್ಕೆ ೧೯೬ ರನ್ ಗಳಿಸಲಷ್ಟೇ ಶಕ್ತವಾಯಿತು. ಮುಂಬೈ ಪರ ರೋಹಿತ್ ಶರ್ಮ ೩೮ ಎಸೆತಗಳಲ್ಲಿ ೬೮ ಹಾಗೂ ನಮನ್ ಧೀರ್ ೨೮ ಎಸೆತಗಳಲ್ಲಿ ೬೨ ರನ್ ಗಳಿಸಿದರು. ಲಖನೌ ಪರ ರವಿ ಬಿಷ್ಣೋಯ್ ಹಾಗೂ ನವೀನ್-ಉಲ್-ಹಕ್ ತಲಾ ಎರಡು ವಿಕೆಟ್ ಪಡೆದರು. ತಮ್ಮ ಬಿರುಸಿನ ಬ್ಯಾಟಿಂಗ್‌ಗಾಗಿ ನಿಖೋಲಸ್ ಪೂರನ್ ಪಂದ್ಯ ಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು. ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿಂದು ನಡೆಯಲಿರುವ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಹಾಗೂ ಚೆನ್ನೈ ಸೂಪರ್ ಕಿಂಗ್ಸ್ ತಂಡಗಳು ಮುಖಾಮುಖಿಯಾಗಲಿವೆ. ಉಭಯ ತಂಡಗಳಿಗೂ ಈ ಪಂದ್ಯ ಮಹತ್ವದ್ದಾಗಿದ್ದು, ಗೆದ್ದ ತಂಡಕ್ಕೆ ಪ್ಲೇಆಫ್ ಹಂತಕ್ಕೇರಲು ಹಾದಿ ಸುಗಮವಾಗಲಿದೆ. ಪಂದ್ಯ ರಾತ್ರಿ ೭.೩೦ಕ್ಕೆ ಆರಂಭವಾಗಲಿದೆ.

******

ಥಾಯ್ಲೆಂಡ್ ಓಪನ್ ಬ್ಯಾಡ್ಮಿಂಟನ್ ಚಾಂಪಿಯನ್‌ಶಿಪ್‌ನಲ್ಲಿ ಭಾರತದ ಸಾತ್ವಿಕ್ ಸಾಯಿರಾಜ್ ರಾಂಕಿರೆಡ್ಡಿ ಮತ್ತು ಚಿರಾಗ್ ಶೆಟ್ಟಿ ಜೋಡಿ ಸೆಮಿಫೈನಲ್ಸ್ ಪ್ರವೇಶಿಸಿದೆ. ಈ ಜೋಡಿ ಪುರುಷರ ಸಿಂಗಲ್ಸ್ ವಿಭಾಗದ ಕ್ವಾರ್ಟರ್ ಫೈನಲ್‌ನಲ್ಲಿ ಮಲೇಷಿಯಾದ ಜುನೈದಿ ಅರೀಫ್ ಮತ್ತು ರಾಯ್ ಕಿಂಗ್ ಯಾಕ್ ಜೋಡಿಯನ್ನು ೨೧-೭, ೨೧-೧೪ರಿಂದ ಮಣಿಸಿದೆ. ಮತ್ತೊಂದೆಡೆ ಮಹಿಳೆಯರ ಡಬಲ್ಸ್ ವಿಭಾಗದ ಸೆಮಿಫೈನಲ್ಸ್ ಪಂದ್ಯದಲ್ಲಿ ಭಾರತದ ಅಶ್ವಿನಿ ಪೊನ್ನಪ್ಪ ಮತ್ತು ತನಿಶಾ ಕ್ರಾಸ್ಟೊ ಜೋಡಿಯು ಥಾಯ್ಲೆಂಡ್ ಜೋಡಿ ವಿರುದ್ಧ ಸೆಣಸಲಿದೆ.

******

ಟರ್ಕಿಯ ಕಪಾಡೋಸಿಯಾದಲ್ಲಿ ನಡೆದ ವಿಶ್ವ ಟೇಬಲ್ ಟೆನಿಸ್ ಪಂದ್ಯಾವಳಿಯಲ್ಲಿ ಭಾರತದ ಪೊಯ್‌ಮಂಟಿ ಬೈಸ್ಯಾ ಮತ್ತು ಆಕಾಶ್ ಜೋಡಿ, ಮಿಶ್ರ ಡಬಲ್ಸ್ ಕಿರೀಟ ಮುಡಿಗೇರಿಸಿಕೊಂಡಿದೆ.

ಫೈನಲ್ಸ್ ಪಂದ್ಯದಲ್ಲಿ ಅನಿರ್ಬನ್ ಘೋಷ್ ಮತ್ತು ಸ್ವಸ್ತಿಕಾ ಘೋಷ್ ಜೋಡಿಯನ್ನು ೩-೨ ಅಂಕಗಳಿಂದ ಬೈಸ್ಯಾ ಮತ್ತು ಆಕಾಶ್ ಜೋಡಿ ಮಣಿಸಿತು.

***END***